ದಿನಾಂಕ: 06.09.2021 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರಾಜೇಶ್ವರಿ, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ವೆಂಕಟೇಶ್, ಟಿ.ಐ.-101
6. ಶ್ರೀ ಎಂ. ರವೀಂದ್ರನಾಥ್, ಸದಸ್ಯರು
7. ಶ್ರೀ ಮಾರುತಿ, ಸದಸ್ಯರು
8. ಶ್ರೀ ಸುಬ್ರಮಣ್ಯ ಸದಸ್ಯರು

ದಿನಾಂಕ: 07.07.2021 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 06.09.2021ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. **ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ,** ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

ದಿನಾಂಕ: 14.06.2021 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 07.07.2021ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ, ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಶ್ರೀ ರವೀಂದ್ರನಾಥ್, ಸದಸ್ಯರು, ಕರೇಕಲ್ಲು ಪ್ರದೇಶದಲ್ಲಿ ರಸ್ತೆಯಲ್ಲಿ ಗುಂಡಿ ಬಿದ್ದಿದ್ದು, ಅದಕ್ಕೆ ವಾರ್ಡ್ ಅಭಿಯಂತರರಿಂದಿ ತುರ್ತಾಗಿ ಕೆಲಸ ಕೈಗೊಳ್ಳಲಾಗುವುದೆಂದು ತಿಳಿಸಿದರು.
2. ಕಂದಾಯ ಇಲಾಖೆಯ ಶ್ರೀ ವೆಂಕಟೇಶ್ ರವರು ಸಭೆಗೆ ಹಾಜರಾಗಿ ಈ ದಿನ ಈ ಹಿಂದೆ ಪ್ರತಿ ಚುನಾವಣೆಗಾಗಿ ಮ್ಯಾಕ್ಸ್ ಮುಲ್ಲರ್ ಶಾಲೆಯನ್ನು ಮತಗಟ್ಟೆಗಾಗಿ ಒಂದು ರೂಮನನ್ನು ಅಳವಡಿಸಿಕೊಳ್ಳಲಾಗಿತ್ತು. ಪ್ರಸ್ತುತ ಶಾಲೆಯನ್ನು ಸ್ಥಳಾಂತರ ಮಾಡಿರುವ ಹಿನ್ನಲೆಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ಕಚೇರಿಯಲ್ಲಿ ಆ ಭಾಗದ ಜನ ಪ್ರತಿನಿಧಿಗಳನ್ನು ಕರೆಸಿ ಸಭೆಯನ್ನು ನಡೆಸುವ ಸಲುವಾಗಿ ನಮ್ಮ ಇಲಾಖೆಯವರು ಹಾಜರಾಗಿರುವುದಿಲ್ಲ. ಆಗಾಗಿ ಸದರಿ ಶ್ರೀ ವೆಂಕಟೇಶ್ ರವರು ಪ್ರಸ್ತುತ ಸಾಲಿನ ತೆರಿಗೆ ಸಂಗ್ರಹಣೆಯನ್ನು 4.8 ಕೋಟಿ ಗುರಿಯನ್ನು ನಿಗಧಿಪಡಿಸಲಾಗಿದ್ದು, ಅದರಲ್ಲಿ 3.5 ಕೋಟಿ ಗುರಿಯನ್ನು ಸಾಧಿಸಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

3. ಪು.ತಿ.ನೋ.

Scanned by CamScanner

4. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಸಭೆಯಲ್ಲಿ ಮಾತನಾಡುತ್ತಾ, 1 ರಿಂದ 198 ವಾರ್ಡ್ ಗಳಲ್ಲಿ ಬರುವ ಪೌರಕಾರ್ಮಿಕರು ಮುಷ್ಕರ ಇರುವ ಕಾರಣ ಬೆಳಿಗ್ಗೆ ಪಾಳಿಯಲ್ಲಿ ಕಸ ನಿರ್ವಹಣೆಯನ್ನು ಮಾಡಲು ಸ್ವಲ್ಪ ವ್ಯತ್ಯಾಸವಾಗಿರುವ ಕಾರಣ ಪೌರಕಾರ್ಮಿಕರು ಚರ್ಚಿಸಿ ಮಧ್ಯಾಹ್ನದ ಪಾಳಿಯಲ್ಲಿ ಕೆಲಸ ನಿರ್ವಹಿಸುವಂತೆ ಮನವಿ ಮಾಡಿರುತ್ತೇನೆ ಎಂದು ಸಭೆಯಲ್ಲಿ ತಿಳಿಸಿದರು.

5. ಶ್ರೀಮತಿ ರಾಜೇಶ್ವರಿ, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತ, ಶೇ. 100ರಷ್ಟು 100 ಭಾಗ ಕೋವಿಡ್-3ನೇ ಅಲೆಗೆ ಮುನ್ನೆಚ್ಚರಿಕೆ ಕ್ರಮವಾಗಿ 3ನೇ ಅಲೆಯನ್ನು ಎದುರಿಸಲು ಸಿದ್ಧರಾಗಿರುತ್ತೇವೆ ಸುಮಾರು ಸಂಜೆ 8ರವರೆಗೆ ಕೋ-ವ್ಯಾಕ್ಸಿನ್ ಮತ್ತು ಕೋವೀಶೀಲ್ಡ್ ಗಳನ್ನು ಸುಮಾರು 18 ವರ್ಷ ಮೇಲ್ಪಟ್ಟ ಪುರುಷರು ಮತ್ತು ಮಹಿಳೆಯರಿಗೆ ವ್ಯಾಕ್ಸಿನ್ ನನ್ನು ಸಮರ್ಪಕವಾಗಿ ವಿತರಣೆ ಮಾಡಿರುತ್ತೇವೆ. ಇದರಲ್ಲಿ ಯಾವುದೇ ತೊಂದರೆ ಇರುವುದಿಲ್ಲ.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ವಾರ್ಡ್ ಸಮಿತಿ | ನೋಡಲ್ ಅಧಿಕಾರಿಗಳು<br>ವಾರ್ಡ್ ನಂ. 101 |

Scanned by CamScanner